105

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೋಟಾ ಶ್ರೀನಿವಾಸ ಪೂಜಾರಿ, ಇವರು ನಿಯಮ 72 ರಡಿ ಮಂಡಿಸಿರುವ ಸೂಚನೆಗೆ ಉತ್ತರ

**ಸೂಚನೆ:-**

ದಕ್ಷಿಣ ಕನ್ನಡ ಜಿಲ್ಲಾಡಳಿತ ಸಂಕೀರ್ಣದ ಕಾಮಗಾರಿ ವಿಳಂಬವಾಗುತ್ತಿರುವ ಕುರಿತು.

**ಉತ್ತರ:-**

ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾ ಕಛೇರಿಗಳ ಜಿಲ್ಲಾ ಸಂಕೀರ್ಣ ಕಟ್ಟಡವನ್ನು ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ತಾಲ್ಲೂಕಿನ ಅಳಪೆ ಪಡೀಲ್ ಗ್ರಾಮದ ಸರ್ವೆ ನಂ.23/4ಬಿ, 23/12ಬಿ, 23/6ಬಿ ಮತ್ತು 23/3 ರಲ್ಲಿನ 5.96 ಎಕರೆ ಜಮೀನಿನಲ್ಲಿ ರೂ.41.00 ಕೋಟಿಗಳ ಅಂದಾಜು ಪಟ್ಟಿಗೆ ಸರ್ಕಾರದ ಆದೇಶ ಸಂಖ್ಯೆ: ಕಂಇ 87 ಡಬ್ಲ್ಯೂಬಿಆರ್ 2011; ದಿನಾಂಕ: 28.04.2015 ರನ್ವಯ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಕಂಇ 87 ಡಬ್ಲ್ಯೂಬಿಆರ್ 2011; ದಿನಾಂ: 16.07.2021 ರನ್ವಯ ಸದರಿ ಜಿಲ್ಲಾ ಕಛೇರಿಗಳ ಸಂಕೀರ್ಣ ನಿರ್ಮಾಣ ಕಾಮಗಾರಿಯ ಒಟ್ಟು ರೂ.55.00 ಕೋಟಿಗಳ ಪರಿಷ್ಕೃತ ಅಂದಾಜುಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

ಅದರಂತೆ, ಸದರಿ ಜಿಲ್ಲಾ ಕಛೇರಿಗಳ ಸಂಕೀರ್ಣ ಕಟ್ಟಡ ಕಾಮಗಾರಿಗೆ ವಿವಿಧ ಆದೇಶಗಳನ್ವಯ ಇಲ್ಲಿಯವರೆಗೆ ರೂ.53.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

ಮುಂದುವರೆದು, ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾ ಕಛೇರಿಗಳ ಸಂಕೀರ್ಣ ಕಟ್ಟಡವು ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸುವ ಸಲುವಾಗಿ ಸದರಿ ಕಟ್ಟಡದ ಎರಡನೇ ಹಂತದ ಕಾಮಗಾರಿಗೆ ರೂ.32.00 ಕೋಟಿಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಜಿಲ್ಲಾಧಿಕಾರಿ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ತತ್ಸಂಬಂಧವಾಗಿ, ಆರ್ಥಿಕ ಇಲಾಖೆಯ ಅಭಿಪ್ರಾಯದಂತೆ ದಕ್ಷಿಣ ಕನ್ನಡ ಜಿಲ್ಲೆಯ ನೂತನ ಜಿಲ್ಲಾ ಕಛೇರಿಗಳ ಸಂಕೀರ್ಣ ಕಟ್ಟಡದ 2ನೇ ಹಂತದ ಕಾಮಗಾರಿಗಳನ್ನು ಕನಿಷ್ಟ ಅವಶ್ಯಕತೆಗಳಿಗೆ ಮಿತಿಗೊಳಿಸಿ, ಅದರಂತೆ ಪರಿಷ್ಕೃತ ಅಂದಾಜುಪಟ್ಟಿ ಮತ್ತು ನಕ್ಷೆಯನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ ಇವರಿಗೆ ಈಗಾಗಲೇ ತಿಳಿಸಲಾಗಿದೆ. ಪರಿಷ್ಕೃತ ಅಂದಾಜು ಬಂದ ಕೂಡಲೇ ಮುಂದಿನ ಕ್ರಮವಹಿಸಲಾಗುವುದು.

**ಆರ'ಡಿ 111 ಡಬ್ಲ್ಯೂಬಿಆರ್ 2023**

**(ಕೃಷ್ಣ ಬೈರೇಗೌಡ)**
**ಕಂದಾಯ ಸಚಿವರು.**